# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1907 (2203)<br>(ಆರ್ಥಿಕ ಇಲಾಖೆಯಿಂದ ವರ್ಗಾವಣೆಗೊಂಡಿರುವ ಪ್ರಶ್ನೆ) |
| ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 26-03-2026 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸುಮಾರು 5 ಲಕ್ಷಕ್ಕಿಂತ ಹೆಚ್ಚು ಜನಸಖ್ಯೆಯನ್ನು ಹೊಂದಿರುವ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕು ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಮುಂದುವರೆಯುತ್ತಿದ್ದು, ರಾಯಚೂರು ಜಿಲ್ಲಾ ಕೇಂದ್ರದಿಂದ ಸುಮಾರು 91 ಕಿ.ಮೀ. ದೂರದಲ್ಲಿದ್ದು, ಜನರು ಜಿಲ್ಲಾ ಕೇಂದ್ರಕ್ಕೆ ಅಲೆದಾಡುವುದು ಕಷ್ಟಕರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ತುರವಿಹಾಳ (ಪ್ರಸ್ತಾಪಿತ ನೂತನ ತಾಲ್ಲೂಕು), ಮಸ್ಕಿ, ಸಿರಗುಪ್ಪ, ಕಾರಟಗಿ ತಾಲ್ಲೂಕುಗಳು ಸಿಂಧನೂರು ತಾಲೂಕು ಕೇಂದ್ರದಿಂದ ಕೇವಲ 50 ಕಿ.ಮೀ ಗಿಂತಲೂ ಕಡಿಮೆ ದೂರದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಬಂದಿದ್ದಲ್ಲಿ, ಸಿಂಧನೂರು ತಾಲ್ಲೂಕು ಕೇಂದ್ರವನ್ನು ನೂತನ ಜಿಲ್ಲಾ ಕೇಂದ್ರವನ್ನಾಗಿ ಮಾಡುವ ಪ್ರಸ್ತಾವನೆ ಪ್ರಸ್ತುತ ಯಾವ ಹಂತದಲ್ಲಿದೆ; | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕನ್ನು ನೂತನ ಜಿಲ್ಲಾ ಕೇಂದ್ರವನ್ನಾಗಿ ಸೃಜಿಸುವ ಸಂಬಂಧದ ಕೋರಿಕೆಗಳು ಸ್ವೀಕೃತವಾಗಿರುತ್ತವೆ. ಸದರಿ ಕೋರಿಕೆಗಳು ಪರಿಗಣಿಸಲು ಸೂಕ್ತವಾಗಿದ್ದಲ್ಲಿ ಸರ್ಕಾರಕ್ಕೆ ವಿವರವಾದ ಪ್ರಸ್ತಾವನೆ ಸಲ್ಲಿಸುವಂತೆ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ಇವರಿಗೆ ಪತ್ರ ಬರೆಯಲಾಗಿದ್ದು, ಸದರಿಯವರಿಂದ ಯಾವುದೇ ವರದಿ/ ಪ್ರಸ್ತಾವನೆ ಸ್ವೀಕೃತಗೊಂಡಿರುವುದಿಲ್ಲ.<br><br>2026 ನೇ ಸಾಲಿನಲ್ಲಿ ಜನಗಣತಿ ನಡೆಸಲು ಕೇಂದ್ರ ಸರ್ಕಾರವು ಉದ್ದೇಶಿಸಿದ್ದು, ದಿನಾಂಕ: 01-01-2026 ರಿಂದ 31-03-2027ರ ವರೆಗೆ ಆಡಳಿತಾತ್ಮಕ ಗಡಿಗಳನ್ನು ಬದಲಾವಣೆ ಮಾಡದಂತೆ ಕೇಂದ್ರ ಸರ್ಕಾರವು ರಾಜ್ಯಕ್ಕೆ ಸೂಚನೆ ನೀಡಿದೆ. ಆದ್ದರಿಂದ ಸರ್ಕಾರವು ಪ್ರಸ್ತುತ ಹೊಸ ಜಿಲ್ಲೆಗಳ ರಚನೆಗೆ ಸಂಬಂಧಿಸಿದಂತೆ ಯಾವುದೇ ತಾತ್ವಿಕ ನಿರ್ಣಯ ಕೈಗೊಂಡಿರುವುದಿಲ್ಲ. |
| ಈ) | ಯಾವ ಕಾಲಮಿತಿಯೊಳಗೆ ತುರುವಿಹಾಳ (ಪ್ರಸ್ತಾಪಿತ ನೂತನ ತಾಲ್ಲೂಕು), ಮಸ್ಕಿ, ಸಿರಗುಪ್ಪ, ಕಾರಟಗಿ ತಾಲ್ಲೂಕುಗಳು ಒಳಗೊಂಡಂತೆ ಸಿಂಧನೂರು ತಾಲ್ಲೂಕನ್ನು ನೂತನ ಜಿಲ್ಲಾ ಕೇಂದ್ರವನ್ನಾಗಿ ಘೋಷಣೆ ಮಾಡಲಾಗುವುದು? | |

ಸಂಖ್ಯೆ: ಕಂಇ 19 ಎಲ್‌ಆರ್‌ಡಿ 2026

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು